ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೨೩**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೊಂಬತ್ತನೇ ಅಧಿವೇಶನ**

**(ಮುಂದುವರೆದ ಉಪವೇಶನ)**

**ಬುಧವಾರ, ದಿನಾಂಕ: ೧೮ನೇ ನವೆಂಬರ್, ೨೦೧೫**

---

**ಸಮೂಹ – III**

೧. ಅರಣ್ಯ ಸಚಿವರು

೨. ಕಂದಾಯ ಸಚಿವರು

೩. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು

೪. ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

೫. ಸಣ್ಣ ನೀರಾವರಿ ಸಚಿವರು

೬. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು

೭. ಕಾರ್ಮಿಕ ರಾಜ್ಯ ಸಚಿವರು

---

## ಕೈಗಾರಿಕಾ ತರಬೇತಿ ಸಂಸ್ಥೆಗಳು

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೩೧ (೨೬೩೪) ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಕೈಗಾರಿಕಾ ತರಬೇತಿ ಸಂಸ್ಥೆಗಳೆಷ್ಟು;

(ಆ) ಸ್ವಂತ ಕಟ್ಟಡ ಹೊಂದಿರುವಂತಹ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳೆಷ್ಟು;

(ಇ) ಸ್ವಂತ ಕಟ್ಟಡ ಹೊಂದಿಲ್ಲದ ಮತ್ತು ಮೂಲಭೂತ ಸೌಕರ್ಯಗಳಿಲ್ಲದ ಕಾಲೋನಿಗಳು ಯಾವುವು; (ತಾಲ್ಲೂಕುವಾರು ವಿವರ ನೀಡುವುದು)

**ಕರ್ನಾಟಕ ರಾಜ್ಯದಲ್ಲಿ ಪ್ಲಾಸ್ಟಿಕ್ ಬಳಕೆ ನಿಷೇಧಿಸುವ ಕುರಿತು**

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೩೩೨ (೨೫೪೪) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ರಾಜ್ಯದಲ್ಲಿ ಪ್ಲಾಸ್ಟಿಕ್ ಬಳಕೆ ನಿಷೇಧಿಸುವ ಯೋಜನೆ ಸರ್ಕಾರಕ್ಕಿದೆಯೇ;

(ಆ) ಪ್ಲಾಸ್ಟಿಕನ್ನು ಬಳಕೆ ಹಂತದಲ್ಲಿ ತಡೆಯುವ ಬದಲು ತಯಾರಿಕಾ ಹಂತದಲ್ಲಿಯೇ ತಡೆಯುವ ಸಕಾರಾತ್ಮಕ ಕಾನೂನುಗಳನ್ನು ತರಲು ಸರ್ಕಾರಕ್ಕಿರುವ ಸಮಸ್ಯೆಗಳೇನು;

(ಇ) ಈಗಾಗಲೇ ಪ್ಲಾಸ್ಟಿಕ್ ಉತ್ಪನ್ನಗಳನ್ನು ನಿಷೇಧಿಸಿದ್ದಲ್ಲಿ, ಅದಕ್ಕಾಗಿ ಅನುಸರಿಸಿದ ಮಾನದಂಡಗಳೇನು;

(ಈ) ಪ್ಲಾಸ್ಟಿಕ್ ಬಳಕೆ ನಿಷೇಧದ ಬಗ್ಗೆ ಮುಂದುವರೆದ ರಾಷ್ಟ್ರಗಳು ಅಳವಡಿಸಿಕೊಂಡಿರುವ ನಿಯಮಗಳೇನು? (ವಿವರ ನೀಡುವುದು)

**ನಗರ ಪ್ರದೇಶದ ನೇಕಾರರಿಗೆ ತೊಂದರೆಯಾಗಿರುವ ಬಗ್ಗೆ**

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು)–**

೩೩೩ (೨೫೫೯) ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ಎರಡು ವರ್ಷಗಳಿಂದೀಚೆಗೆ ನಗರ ಪ್ರದೇಶದಲ್ಲಿ ವಿದ್ಯುಚ್ಛಕ್ತಿ ಮಂಡಲಿ ಬಡ ನೇಕಾರರು ನೇಕಾರಿಕೆ ಮಾಡಬಾರದೆಂದು ನೋಟಿಸ್ ಜಾರಿ ಮಾಡಲಾಗಿದೆಯೇ; ಹಾಗಿದ್ದಲ್ಲಿ, ಇದಕ್ಕೆ ಕಾರಣವೇನು;

(ಆ) ಹಲವಾರು ವರ್ಷಗಳಿಂದ ನೇಕಾರಿಕೆ ಉದ್ಯಮದಲ್ಲಿ ಬದುಕುತ್ತಿದ್ದು, ಈ ಭಾಗದಲ್ಲಿ ನೇಕಾರಿಕೆ ನಿಲ್ಲಿಸಿದರೆ ನೇಕಾರರ ಸ್ಥಿತಿಗತಿಗಳೇನು;

(ಇ) ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಪರ್ಯಾಯ ವ್ಯವಸ್ಥೆಗಳೇನು;

(ಈ) ಬೇರೆ ಬೇರೆ ಇಲಾಖೆಗಳಿಂದ ನೇಕಾರರಿಗೆ ತೊಂದರೆಯಾಗುತ್ತಿರುವ ಬಗ್ಗೆ ಜವಳಿ ಇಲಾಖೆಯ ಗಮನಕ್ಕೆ ಬಂದಿದ್ದರೂ, ಇದುವರೆಗೆ ಪರಿಹರಿಸದಿರಲು ಕಾರಣವೇನು; ಯಾವ ಕಾಲಮಿತಿಯೊಳಗೆ ಪರಿಹರಿಸಲಾಗುವುದು?

## ನೇಕಾರರ ಕೌಶಲ್ಯ ಅಭಿವೃದ್ಧಿ ಕುರಿತು ಪ್ರಚಾರ

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೩೩೪ (೨೬೦೫) ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನೇಕಾರರ ಕೌಶಲ್ಯ ಅಭಿವೃದ್ಧಿ ಬಗ್ಗೆ ಪ್ರಚಾರ ಮತ್ತು ತರಬೇತಿ ನೀಡುವ ಬಗ್ಗೆ ಸರ್ಕಾರ ಯಾವ ಯಾವ ಕ್ರಮ ಕೈಗೊಂಡಿದೆ;

(ಆ) ನೇಕಾರರ ಕೌಶಲ್ಯ ತರಬೇತಿಗೆ ಅನುಗುಣವಾಗಿ ಅಗತ್ಯ ಸಾಮಗ್ರಿಗಳನ್ನು ಇಲಾಖೆಯಿಂದ ಒದಗಿಸಲಾಗಿದೆಯೇ;

(ಇ) ಕೌಶಲ್ಯ ತರಬೇತಿಯ ನಂತರ ತಂತ್ರಜ್ಞಾನವುಳ್ಳ ಸುಧಾರಿತ ವಿದ್ಯುತ್ ಮಗ್ಗಗಳನ್ನು ನೇಕಾರರಿಗೆ ರಿಯಾಯಿತಿ ದರದಲ್ಲಿ ಒದಗಿಸುವ ಯೋಜನೆ ಸರ್ಕಾರದ ಮುಂದಿದೆಯೇ? (ಸಂಪೂರ್ಣ ವಿವರ ಒದಗಿಸುವುದು)

## ರಾಜ್ಯದಲ್ಲಿ ಎತ್ತಿನಹೊಳೆ ಯೋಜನೆಗೆ ಮೀಸಲಿಟ್ಟ ಅನುದಾನ ಕುರಿತು

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೩೩೫ (೨೫೫೦) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎತ್ತಿನಹೊಳೆ ಯೋಜನೆಗೆ ಮೀಸಲಿಟ್ಟ ಒಟ್ಟು ಅನುದಾನ ಎಷ್ಟು; ಮತ್ತು ಈ ಯೋಜನೆಯಲ್ಲಿ ಎತ್ತಿನಹೊಳೆ ಪ್ರದೇಶದಿಂದ ಎಷ್ಟು ತಿಂಗಳು ನೀರನ್ನು ಹರಿಸಲಾಗುವುದು; ಎಷ್ಟು ಟಿ.ಎಂ.ಸಿ. ನೀರನ್ನು ನಿರೀಕ್ಷಿಸಲಾಗಿದೆ; (ವಿವರ ನೀಡುವುದು)

(ಆ) ಎತ್ತಿನಹೊಳೆ ಯೋಜನೆಗೆ ಪರ್ಯಾಯವಾಗಿ ಕರಾವಳಿ ಜಿಲ್ಲೆಗೆ ನೀರಿನ ಸಮಸ್ಯೆಯನ್ನು ನೀಗಿಸಲು ಪರ್ಯಾಯ ಯೋಜನೆಯನ್ನು ರಚಿಸಲಾಗಿದೆಯೇ; ರೂಪಿಸಲಾಗಿದ್ದರೆ, ಯೋಜನೆ ಬಗ್ಗೆ ವಿವರ ನೀಡುವುದು;

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎತ್ತಿನಹೊಳೆ ಯೋಜನೆ ವಿರುದ್ಧ ಪ್ರತಿಭಟನೆ ಮಾಡಿದ ಪ್ರತಿಭಟನೆಗಾರರಿಗೆ ಈ ಯೋಜನೆ ಬಗ್ಗೆ ಮಾಹಿತಿ ನೀಡಲು ಇಲಾಖೆ ಕೈಗೊಂಡ ಕ್ರಮಗಳೇನು; ಇದರ ಫಲಿತಾಂಶವೇನು? (ವಿವರ ನೀಡುವುದು)

## ಹೈದರಾಬಾದ್–ಕರ್ನಾಟಕ ಭಾಗದ ಜಿಲ್ಲೆಗಳಲ್ಲಿನ ವಿವಿಧ ಯೋಜನೆಗಳು

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೩೩೬ (೨೫೧೦) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದರಾಬಾದ್–ಕರ್ನಾಟಕದ ಜಿಲ್ಲೆಗಳಲ್ಲಿ ಪ್ರಗತಿಯಲ್ಲಿರುವ ಭಾರಿ ಮತ್ತು ಮಧ್ಯಮ ನೀರಾವರಿ ಇಲಾಖೆಯಡಿ ಬರುವ ವಿವಿಧ ನೀರಾವರಿ ಯೋಜನೆಗಳು ಯಾವುವು; (ತಾಲ್ಲೂಕುವಾರು, ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ನೀರಾವರಿ ಯೋಜನೆಗಳಿಗೆ ಸರ್ಕಾರ ಮಂಜೂರು ಮಾಡಿದ ಮತ್ತು ಬಿಡುಗಡೆ ಮಾಡಿದ ಹಾಗೂ ವೆಚ್ಚ ಮಾಡಿದ ಅನುದಾನ ಎಷ್ಟು; (ಯೋಜನೆಗಳವಾರು ಕೈಗೊಂಡ ಕಾಮಗಾರಿಗಳ ವಿವರ ಒದಗಿಸುವುದು)

(ಇ) ಹಾಗಿದ್ದಲ್ಲಿ, ಕಳೆದ ಎರಡು ವರ್ಷಗಳಿಂದ ಆಗಿರುವ ಒಟ್ಟಾರೆ ಪ್ರಗತಿ ಏನು? (ಯೋಜನೆವಾರು ತಾಲ್ಲೂಕುವಾರು ಮಾಹಿತಿ ಒದಗಿಸುವುದು)

## ಮುದ್ರಾಂಕ ಶುಲ್ಕದ ಬಗ್ಗೆ

**ಶ್ರೀ ಅಶ್ವತ್‌ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೩೩೭ (೨೫೫೬) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮುದ್ರಾಂಕ ಶುಲ್ಕವನ್ನು ಹೆಚ್ಚಿಸಲು ಇರುವ ಮಾನದಂಡವೇನು; ವರ್ಷದಲ್ಲಿ ಎಷ್ಟು ಭಾರಿ ಮುದ್ರಾಂಕ ಶುಲ್ಕವನ್ನು ಹೆಚ್ಚಿಸಬಹುದು; ಕಳೆದ ಎರಡು ವರ್ಷಗಳಿಂದ ರಾಜ್ಯದಲ್ಲಿ ಎಷ್ಟು ಬಾರಿ ಮುದ್ರಾಂಕ ಶುಲ್ಕವನ್ನು ಹೆಚ್ಚಿಸಲಾಗಿದೆ;

(ಆ) ೨೦೧೪ ಮತ್ತು ೨೦೧೫ರ ಜೂನ್ ತಿಂಗಳವರೆವಿಗೂ ರಾಜ್ಯದಲ್ಲಿ ಮುದ್ರಾಂಕ ಶುಲ್ಕವೆಂದು ಬಂದಿರುವ ರಾಜಸ್ವವೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಈ ವರ್ಷದ ಬರಗಾಲ ಪೀಡಿತ ತಾಲ್ಲೂಕುಗಳು ಯಾವುವು; ಈಗಾಗಲೇ ಬರಗಾಲ ಪೀಡಿತ ಪ್ರದೇಶಗಳಿಗೆ ಬಿಡುಗಡೆ ಮಾಡಿದ ಹಣವೆಷ್ಟು; ಖರ್ಚಾದ ಹಣ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು) ಹೀಗೆ ಬಿಡುಗಡೆ ಮಾಡಲಾಗುವ ಹಣವನ್ನು ಯಾವ ಮಾನದಂಡದಡಿ ಬಿಡುಗಡೆ ಮಾಡಲಾಗುತ್ತದೆ;

(ಈ) ಬರಗಾಲ ಪೀಡಿತ ಪ್ರದೇಶಗಳಿಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರ ಬಿಡುಗಡೆ ಮಾಡಿರುವ ಹಣವೆಷ್ಟು; ಗುರಿ ಎಷ್ಟಾಗಿರುತ್ತದೆ?

## ನಗರದ ಸುತ್ತಮುತ್ತ ನಡೆದಿರುವ ಅರಣ್ಯ ಒತ್ತುವರಿ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ)–**

೩೩೮ (೨೬೦೭) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದ ಸುತ್ತಮುತ್ತ ನಡೆದಿರುವ ಅರಣ್ಯ ಒತ್ತುವರಿ ಕುರಿತು ತನಿಖೆ ನಡೆಸಿ ವರದಿ ನೀಡಲು ಸರ್ಕಾರವು ಹಿರಿಯ ಅರಣ್ಯಾಧಿಕಾರಿ ಯು.ವಿ. ಸಿಂಗ್ ನೇತೃತ್ವದ ಸಮಿತಿಯನ್ನು ರಚಿಸಿರುವುದು ನಿಜವೆ;

(ಆ) ಹಾಗಿದ್ದಲ್ಲಿ, ರಚಿಸಿರುವ ಪ್ರಕ್ರಿಯೆ ಮತ್ತು ಸಮಿತಿಯಲ್ಲಿರುವವರ ಕುರಿತು ವಿವರ ನೀಡುವುದು?

## ಎತ್ತಿನ ಹೊಳೆ ಯೋಜನೆ ಕುರಿತು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೩೩೯ (೨೬೪೧) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬರಪೀಡಿತ ಜಿಲ್ಲೆಗಳಿಗೆ ಕುಡಿಯುವ ನೀರು ಪೂರೈಸುವ ಉದ್ದೇಶದಿಂದ ಜಾರಿಗೊಳಿಸಲಾಗುತ್ತಿರುವ ಎತ್ತಿನಹೊಳೆ ನೀರಾವರಿ ಯೋಜನೆಯ ಅಂದಾಜು ಮೊತ್ತವೆಷ್ಟು;

(ಆ) ಇಲ್ಲಿಯವರೆಗೆ ಈ ಯೋಜನೆಯ ಅನುಷ್ಠಾನಕ್ಕೆ ಸರ್ಕಾರ ಬಿಡುಗಡೆ ಮಾಡಿದ ಅನುದಾನ ಹಾಗೂ ಖರ್ಚಾದ ಅನುದಾನವೆಷ್ಟು;

(ಇ) ಈಗ ಯೋಜನೆಯು ಯಾವ ಹಂತದಲ್ಲಿದೆ, ಯಾವ ಯಾವ ಕಾಮಗಾರಿಗಳು ಅನುಷ್ಠಾನಗೊಂಡಿವೆ;

(ಈ) ಈ ಯೋಜನೆಗೆ ಬೇಕಾದ ಸಾಮಗ್ರಿಗಳ ಖರೀದಿಗೆ ಖರ್ಚಾದ ಅನುದಾನ ಎಷ್ಟು?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆ ಭೀಮಾನದಿ ತೀರದ ಯೋಜನೆಗಳ ಬಗ್ಗೆ

**ಶ್ರೀ ಅಲ್ಲಮ ಪ್ರಭುಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೦ (೨೬೧೦) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ಭೀಮಾನದಿ ತೀರದ ವ್ಯಾಪ್ತಿಯಲ್ಲಿ ಬರುವ ಏತ ನೀರಾವರಿ ಯೋಜನೆಗಳು ಯಾವುವು;

(ಆ) ಅವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಯೋಜನೆಗಳು ಎಷ್ಟು; ಕಾರ್ಯನಿರ್ವಹಿಸದೇ ಇರುವ ಯೋಜನೆಗಳು ಎಷ್ಟು;

(ಇ) ಈ ಯೋಜನೆಗಳಿಂದ ಎಷ್ಟು ಪ್ರದೇಶವು ನೀರಾವರಿಗೆ ಒಳಪಡುತ್ತವೆ; ಈ ಯೋಜನೆಗಳ ನಿರ್ವಹಣೆಗೆ ಒದಗಿಸಲಾದ ಅನುದಾನ ಎಷ್ಟು; ಆ ಪೈಕಿ ಬಿಡುಗಡೆ ಮಾಡಲಾದ ಅನುದಾನ ಎಷ್ಟು; ಖರ್ಚಾದ ವಾರ್ಷಿಕ ವೆಚ್ಚ ಎಷ್ಟು? (ವರ್ಷಾವಾರು ವಿವರ ನೀಡುವುದು)

## ಕಲಬುರಗಿ ತಾಲ್ಲೂಕು ಮಹಾಗಾಂವ ಕ್ರಾಸ್ ಹತ್ತಿರ ಕ್ರೀಡಾಂಗಣ ನಿರ್ಮಾಣದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ)–**

೩೪೧ (೨೫೧೯) ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಲಬುರಗಿ ತಾಲ್ಲೂಕಿನ ಮಹಾಗಾಂವ ಕ್ರಾಸ್ ಹತ್ತಿರ ಸರ್ವೆ ನಂ. ೧೨೯, ೨೨ ಎಕರೆ ಸರ್ಕಾರಿ ಜಮೀನನ್ನು ತಾಲ್ಲೂಕು ಮಟ್ಟದ ಕ್ರೀಡಾಂಗಣ ನಿರ್ಮಾಣ ಮಾಡಲು ಮಂಜೂರು ಮಾಡಲಾಗಿರುವ ವಿಷಯ ಸರ್ಕಾರದ ಗಮನಕ್ಕಿದೆಯೇ; (ವಿವರ ನೀಡುವುದು)

(ಆ) ಸದರಿ ಕ್ರೀಡಾಂಗಣಕ್ಕೆ ಮಂಜೂರಾದ ಜಮೀನನ್ನು ಇಲಾಖೆಗೆ ಹಸ್ತಾಂತರಿಸ ಲಾಗಿದೆಯೇ; ಸದರಿ ಕ್ರೀಡಾಂಗಣದ ಕಟ್ಟಡ ನಿರ್ಮಾಣಕ್ಕಾಗಿ ಎಷ್ಟು ಹಣ ಮಂಜೂರಾಗಿದೆ; ಯಾವ ಮೂಲದಿಂದ ಯಾವಾಗ ಅನುದಾನ ಬಿಡುಗಡೆಯಾಗಿದೆ; (ಸಂಪೂರ್ಣ ವಿವರ ನೀಡುವುದು)

(ಇ) ೧೫ ವರ್ಷ ಕಳೆದರೂ ಸ್ಥಳ ಹಾಗೂ ಅನುದಾನದ ಲಭ್ಯತೆ ಇದ್ದರೂ ಕ್ರೀಡಾಂಗಣ ನಿರ್ಮಾಣ ಮಾಡದೆ ಇರುವುದಕ್ಕೆ ಕಾರಣವೇನು;

(ಈ) ಇನ್ನಾದರೂ ಕ್ರೀಡಾಂಗಣ ನಿರ್ಮಾಣ ಮಾಡಲು ಸರ್ಕಾರ ಮುಂದಾಗುವುದೇ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಮಾಡಲಾಗುವುದು? (ವಿವರ ನೀಡುವುದು)

## ಸಿಂಗಟಾಲೂರು ಏತ ನೀರಾವರಿ ಯೋಜನೆ ಬಗ್ಗೆ ಮಾಹಿತಿ

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ)–**

೩೪೨ (೨೫೭೭) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮುಂಡರಗಿ ತಾಲ್ಲೂಕಿನ ಸಿಂಗಟಾಲೂರು ಏತ ನೀರಾವರಿ ಯೋಜನೆ ಪ್ರಾರಂಭಗೊಂಡಿದ್ದು ಯಾವಾಗ; ಇದನ್ನು ಪೂರ್ಣಗೊಳಿಸಲು ನಿಗದಿಪಡಿಸಿದ ಅವಧಿ ಎಷ್ಟು; ಮತ್ತು ಈ ಯೋಜನೆಗೆ ನಿಗದಿಪಡಿಸಿದ ಒಟ್ಟು ಅನುದಾನ ಎಷ್ಟು;

(ಆ) ಸಿಂಗಟಾಲೂರು ಏತ ನೀರಾವರಿ ಮೊದಲನೆಯ, ಎರಡನೆಯ ಮತ್ತು ಮೂರನೇ ಹಂತಗಳಿಗೆ ಎಷ್ಟು ಹಣ ನಿಗದಿಪಡಿಸಲಾಗಿದೆ; ಅದರಲ್ಲಿ ಇಂದಿನವರೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; (ವಿವರಣೆ ನೀಡುವುದು)

(ಇ) ಎರಡನೇ ಹಂತದ ಯೋಜನೆ ಯಾವಾಗ ಪೂರ್ಣಗೊಳ್ಳುವುದು; ಮತ್ತು ಯಾವಾಗ ಲೋಕಾರ್ಪಣೆ ಮಾಡಲಾಗುವುದು;

(ಈ) ಮೂರನೇ ಹಂತದ ಕಾಮಗಾರಿ ಪ್ರಾರಂಭವಾಗಿದೆಯೇ; ಹಾಗಿದ್ದಲ್ಲಿ, ಇದು ಯಾವಾಗ ಪೂರ್ಣಗೊಳ್ಳುವುದು;

(ಉ) ಈ ಯೋಜನೆಯ ಮೊದಲನೆಯ, ಎರಡನೆಯ ಮತ್ತು ಮೂರನೆಯ ಹಂತಗಳಿಂದ ಎಷ್ಟು ಭೂಮಿಗೆ ನೀರಾವರಿ ಸೌಲಭ್ಯ ಸಿಗಲಿರುವುದು; (ವಿವರಣೆ ನೀಡುವುದು)

(ಊ) ಸಿಂಗಟಾಲೂರು ಏತ ನೀರಾವರಿಯ ಕಾಮಗಾರಿಗಳಲ್ಲಿ ಮುಖ್ಯ ಕಾಲುವೆಗಳನ್ನು ಹೊರತುಪಡಿಸಿ ಉಪ ಕಾಲುವೆಗಳ ಕಾಮಗಾರಿಗಳು ಕಳಪೆ ಮಟ್ಟದಿಂದ ಕೂಡಿರುವ ಬಗ್ಗೆ ಸಾರ್ವಜನಿಕರಿಂದ ದೂರಗಳು ಬಂದಿದ್ದು ನಿಜವೇ; ಹಾಗಿದ್ದಲ್ಲಿ, ಇದರ ಬಗ್ಗೆ ಕೈಗೊಂಡಿರುವ ಕ್ರಮಗಳೇನು?

## ಕಳಸಾ ಬಂಡೂರಿ ಯೋಜನೆಯನ್ನು ಜಾರಿಗೆ ತರುವ ಬಗ್ಗೆ

**ಶ್ರೀ ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೩೪೩ (೨೫೭೨) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳಸಾ ಬಂಡೂರಿ ಯೋಜನೆಗೆ ಸಂಬಂಧಿಸಿದಂತೆ ರಾಜ್ಯವ್ಯಾಪಿ ಪ್ರತಿಭಟನೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಯೋಜನೆಯನ್ನು ಜಾರಿಗೆ ತರಲು ಸರ್ಕಾರಕ್ಕೆ ಇರುವ ಸಮಸ್ಯೆಗಳೇನು;

(ಇ) ಈ ಯೋಜನೆಗೆ ಸಂಬಂಧಿಸಿದಂತೆ ಗೋವಾ ರಾಜ್ಯ ಸರ್ಕಾರದೊಂದಿಗೆ ನಮ್ಮ ರಾಜ್ಯ ಸರ್ಕಾರವು ಯಾವ ರೀತಿ ಸ್ಪಂದನೆ ಮಾಡುತ್ತಿದೆ;

(ಈ) ಈ ಯೋಜನೆಯನ್ನು ಯಾವಾಗ ಜಾರಿಗೆ ತರಲಾಗುವುದು?

## ಕೆರೆ–ಕುಂಟೆಗಳನ್ನು ಪುನಃಶ್ಚೇತನಗೊಳಿಸುವ ಬಗ್ಗೆ

**ಡಾ॥ ಮತ್ತಿಕಟ್ಟೆ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೪ (೨೬೪೭) ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಅನಿಯಂತ್ರಿತ ನಗರೀಕರಣದಿಂದಾಗಿ ಕೆರೆ, ಕುಂಟೆಗಳು ನಾಶವಾಗಿ ಅಂತರ್ಜಲದ ಮಟ್ಟ ತೀವ್ರವಾಗಿ ಕುಸಿದು ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಕೆರೆ–ಕುಂಟೆಗಳ ರಕ್ಷಣೆ ಮತ್ತು ಅಭಿವೃದ್ಧಿಪಡಿಸುವ ಬಗ್ಗೆ ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು;

(ಇ) ರಾಜಕಾಲುವೆ, ಕೆರೆ ಪ್ರದೇಶಗಳ ಅತಿಕ್ರಮಣ ತಡೆಗಟ್ಟಲು ಕಠಿಣ ಕಾನೂನು ಕ್ರಮಗಳನ್ನು ಜರುಗಿಸಲಾಗುವುದೆ?

## ಹಾವೇರಿ ಜಿಲ್ಲೆಯ ಬರಪೀಡಿತ ಪ್ರದೇಶಗಳ ಬಗ್ಗೆ

**ಶ್ರೀ ಸೋಮಣ್ಣ ಮ.ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೫ (೨೬೧೯) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹಾವೇರಿ ಜಿಲ್ಲೆಯಲ್ಲಿ ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಿದ ತಾಲ್ಲೂಕುಗಳು ಎಷ್ಟು; ಹಾಗೂ ಯಾವುವು; ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸದೇ ಇರಲು ಸೂಕ್ತ ಕಾರಣವನ್ನು ನೀಡುವುದು; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಸದರಿ ಬರಗಾಲ ಪರಿಹಾರ ಮೊತ್ತವನ್ನು ಯಾವ ಯಾವ ತಾಲ್ಲೂಕಿಗೆ ಎಷ್ಟು ನೀಡಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಹಾವೇರಿ ಜಿಲ್ಲೆಯಲ್ಲಿ ಇರುವ ಹಳ್ಳಿಗಳ ಸಂಖ್ಯೆ ಎಷ್ಟು; ಈ ಹಳ್ಳಿಗಳಲ್ಲಿ ಸ್ಮಶಾನ ಇರುವ ಹಾಗೂ ಇರದೇ ಇರುವ ಹಳ್ಳಿಗಳು ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಸರ್ಕಾರದಿಂದ ಸ್ಮಶಾನಕ್ಕೆ ಜಾಗ ನೀಡಲಾಗುವುದೇ; ಇಲ್ಲದಿದ್ದಲ್ಲಿ, ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?

**ಪಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ನಿರ್ದೇಶಕರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು, ಕಾಸೂ 640 – 1500 ಪ್ರತಿಗಳು (ಪಿ1)